ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣ ಗಡಿ ವಿಸ್ತರಣೆಯಾಗಿರುವ ಪ್ರದೇಶಗಳನ್ನು ಹೊಸದಾಗಿ ಸರ್ವೆ ಮಾಡಿ ಪುನರ್ ನಿಗದಿಪಡಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

054 (446) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಮಅ/441/ಗ್ರಾಪಂಅ/2016(ಭಾಗ-3) ದಿನಾಂಕ: 28.10.2016ರ ಪ್ರಕಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣ ಗಡಿ ತುಂಬಾ ಹಿಂದೆ ನಿಗದಿಪಡಿಸಿದ್ದು, ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಗ್ರಾಮಠಾಣವನ್ನು ಪುನರ್ ನಿಗದಿಪಡಿಸಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಹೋಬಳಿವಾರು ಗ್ರಾಮಗಳ ಮಾಹಿತಿ ನೀಡುವುದು)

(ಆ) ಮೇಲ್ಕಂಡ ಸುತ್ತೋಲೆಯ ಪ್ರಕಾರ ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಠಾಣಕ್ಕೆ ಹೊಂದಿಕೊಂಡಿರುವ ಗ್ರಾಮಗಳ ಬೆಳವಣಿಗೆಯಾಗಿದ್ದು, ಅಭಿವೃದ್ಧಿಗೊಂಡ ಈ ಪ್ರದೇಶಗಳನ್ನು ಗ್ರಾಮಠಾಣ ವ್ಯಾಪ್ತಿಗೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಗ್ರಾಮಠಾಣಗಳ ವಿಸ್ತರಣೆ ಕಾರ್ಯವನ್ನು ಪೂರ್ಣಗೊಳಿಸಲು ಯಾವ ಕಾಲಮಿತಿಯನ್ನು ನಿಗದಿಪಡಿಸಿದೆ ;

(ಇ) ಸದರಿ ಕಾರ್ಯವು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕಾರ್ಯವನ್ನು ವಿಳಂಬ ಮಾಡುತ್ತಿರುವ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)